೭೩೭೯ ಅದ ದಿನಾಂಕ 24.3.2022 79

**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರ ಗಮನ ಸೆಳೆಯುವ ಸೂಚನೆಗೆ ಉತ್ತರ ಒದಗಿಸುವ ಬಗ್ಗೆ.**

**ವಿಷಯ:** ಮಂಡ್ಯ ವೈದ್ಯಕೀಯ ವಿಜ್ಞಾನ ಶಿಕ್ಷಣ ಸಂಸ್ಥೆಯಲ್ಲಿ ಅಸೋಸಿಯೇಟ್ ಪ್ರೊಫೆಸರ್‌ಗಳಿಗೆ ನಿವೃತ್ತಿ ವೇತನವನ್ನು ಮಂಜೂರು ಮಾಡುವ ಕುರಿತು ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

****

**ಉತ್ತರ:** ವೈದ್ಯಕೀಯ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ವೈದ್ಯಕೀಯ ಕಾಲೇಜುಗಳು ಹಾಗೂ ದಂತ ಕಾಲೇಜುಗಳು ಮತ್ತು ಇದಕ್ಕೆ ಹೊಂದಿಕೊಂಡಿರುವ ಬೋಧಕ ಆಸ್ಪತ್ರೆಗಳು ಹಾಗೂ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳಲ್ಲಿ ದಿನಾಂಕ:01.04.2006ರ ನಂತರ ಖಾಯಂ ಆಗಿ ನೇಮಕಗೊಂಡು ಕಾರ್ಯನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರ ವೃಂದದ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಸರ್ಕಾರದ ಆದೇಶ ಸಂಖ್ಯೆ: ಆಕುಕ 59 ಎಂಎಸ್‌ಎಫ್ 2017, ದಿನಾಂಕ:27.08.2020ರ ಆದೇಶದಂತೆ ದಿನಾಂಕ:27.08.2020 ರಿಂದ ಜಾರಿಗೆ ಬರುವಂತೆ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ಜಾರಿಗೊಳಿಸಲಾಗಿರುತ್ತದೆ. ಸದರಿ ಆದೇಶ ಹೊರಡಿಸಿದ ದಿನಾಂಕದಿಂದ ಉದ್ಯೋಗದಾತರ ವಂತಿಗೆಗಾಗಿ ಅನುದಾನ ಬಿಡುಗಡೆ ಮಾಡಲಾಗಿರುತ್ತದೆ.

ಅದರಂತೆ, ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಎಲ್ಲಾ ಖಾಯಂ ಸಿಬ್ಬಂದಿಗಳಿಗೆ (ಬೋಧಕ ಮತ್ತು ಬೋಧಕೇತರ) ಹೊಸ ಪಿಂಚಣಿ ಯೋಜನೆಯನ್ನು ಅಳವಡಿಸಿಕೊಂಡು ದಿನಾಂಕ:27.08.2020 ರಿಂದ ಹೊಸ ಪಿಂಚಣಿ ಯೋಜನೆಯಡಿ ಸಂಸ್ಥೆಯ ವಂತಿಕೆ ಹಾಗೂ ಸಿಬ್ಬಂದಿ ವಂತಿಕೆಯನ್ನು NPS Trust Account ಇಲ್ಲಿಗೆ ಜಮೆಮಾಡಲಾಗುತ್ತಿದೆ. ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಂಡ್ಯ ಇಲ್ಲಿ ಪ್ರಸ್ತುತ ಈ ಕೆಳಕಂಡ ಖಾಯಂ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರಿಗೆ ಹೊಸ ಪಿಂಚಣಿಯನ್ನು ಪಾವತಿಸಲಾಗುತ್ತಿದೆ.

| SL No | Designation | Numbers |
|---|---|---|
| 1 | Professors | 18 |
| 2 | Associate Professors | 41 |
| 3 | Assistant Professors | 51 |
| 4 | Senior Resident | 10 |
| 5 | CMO & LMO | 11 |
| 6 | Non-Teaching Staff | 227 |

**ಸಂಖ್ಯೆ:** ಎಂಇಡಿ 128ಎಂಪಿಎಸ್ 2022

(ಡಾ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು